ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 15–10–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಯುವಜನ ಸೇವೆ ಮತ್ತು ಮೀನುಗಾರಿಕೆ ಸಚಿವ ಶ್ರೀ ಅಭಯ್‌ಚಂದ್ರ ಜೈನ್ ಅವರಿಂದ ಪತ್ರಿಕಾಗೋಷ್ಠಿ ಹಾಗೂ ಏಷ್ಯನ್ ಗೇಮ್ಸ್ ವಿಜೇತ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ಘೋಷಣೆ. | 16-10-2014 ಗುರುವಾರ ಬೆಳಿಗ್ಗೆ 11.00 ಗಂಟೆಗೆ | ಸಮ್ಮೇಳನ ಸಭಾಂಗಣ ರಾಜ್ಯ ಯುವ ಕೇಂದ್ರದ 2ನೇ ಮಹಡಿ, ನೃಪತುಂಗ ರಸ್ತೆ, ಬೆಂಗಳೂರು - 560 001 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಡಾ ಗುಬ್ಬಿ ವೀರಣ್ಣ ಪ್ರಶಸ್ತಿ ಪ್ರಕಟ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಬ್ಯಾಲದಿಂದಲೇ ವೃತ್ತಿ ನಾಟಕ ಕಂಪನಿಗಳಲ್ಲಿ ಪಾತ್ರ ಮಾಡುತ್ತಾ, ಸಮಾಜ ಏಳಿಗೆಗೆ ದುಡಿಯುತ್ತ, ಹಲವಾರು ನಾಟಕಗಳಲ್ಲಿ ಅಭಿನಯಿಸಿ, ನಿರ್ದೇಶಿಸಿ ಬಂದವರಾದ ಶ್ರೀ ಫಕೀರಪ್ಪ ವರವಿ, ಗದಗ ಇವರನ್ನು ಗುಬ್ಬಿ ವೀರಣ್ಣ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಶ್ರೀ ಫಕೀರಪ್ಪ ವರವಿ, ಗದಗ ಇವರಿಗೆ 2013 ನೇ ಸಾಲಿನ ಗುಬ್ಬಿ ವೀರಣ್ಣ ಪ್ರಶಸ್ತಿಯನ್ನು ನೀಡಿ ಗೌರವಿಸಲಿದೆ.

ಶ್ರೀ ಹೆಚ್. ಜಿ. ಸೋಮಶೇಖರ ರಾವ್, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿತ್ತು.

ಕವನ:ಜಿಪಿಆರ್

# ಪುಸ್ತಕ ಬಹುಮಾನಕ್ಕೆ ಲೇಖಕರಿಂದ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿಯು ಯಕ್ಷಗಾನ/ತೆಂಕು, ಬಡಗು ಮತ್ತು ಘಟ್ಟದಕೋರೆ) ಮೂಡಲಪಾಯ, ಯಕ್ಷಗಾನ ಗೋಂಬೆಯಾಟ (ಸೂತ್ರದ ಮತ್ತು ತೊಗಲುಗೊಂಬೆ) , ಶ್ರೀಕೃಷ್ಣಪಾರಿಜಾತ, ಸಣ್ಣಾಟ, ದೊಡ್ಡಾಟ ಇತ್ಯಾದಿ ಕಲಾಪ್ರಕಾರಗಳಿಗೆ ಸಂಬಂಧಿಸಿದ 2013 ರಲ್ಲಿ ಪ್ರಕಟಿಸಿರುವ ಮಸ್ತಕಗಳನ್ನು ಪುಸ್ತಕ ಬಹುಮಾನಕ್ಕೆ ಆಯ್ಕೆ ಮಾಡಲು ಲೇಖಕರಿಂದ ಅರ್ಜಿ ಆಹ್ವಾನಿಸಿದೆ.

ಆಯ್ಕೆಯಾದ ಪುಸ್ತಕ್ಕೆ ರೂ. 5,000/– ಬಹುಮಾನವನ್ನು ನೀಡಲಾಗುವುದು. ಯಕ್ಷಗಾನ ಮತ್ತು ಬಯಲಾಟದ ವಿವಿಧ ಆಯಾಮಗಳ ಬಗ್ಗೆ (ಸಂಗೀತ, ಆಹಾರ್ಯ ಅಭಿನಯ ಇತ್ಯಾದಿ) ಸಂಶೋಧನೆ, ವಿಮರ್ಶೆ, ಜೀವನಚರಿತ್ರೆ, ಪ್ರಸಂಗ, ಮಸ್ತಕ ಇತ್ಯಾದಿ ಪ್ರಕಾರಗಳನ್ನು ಒಳಗೊಂಡ ಪುಸ್ತಕಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದೆ. ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು. ಸಂಪದಿತ, ಅಭಿನಂದನಾ ಕೃತಿಯಾಗಿರಬಾರದು, ಸ್ವರಚಿತವಾಗಿರಬೇಕು. ಪ್ರಥಮ ಮುದ್ರಣ ಆವೃತ್ತಿಯಾಗಿರಬೇಕು.

ಬಹುಮಾನಕ್ಕೆ ಪುಸ್ತಕವನ್ನು ಕಳುಹಿಸುವವರು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ.ರಸ್ತೆ, ಬೆಂಗಳೂರು - 560 002, ಇವರಿಗೆ ಅಕ್ಟೋಬರ್ 30, 2014 ರೊಳಗೆ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು ಕಳುಹಿಸಬೇಕು. ಹೆಚ್ಚಿನ ವಿವರಗಳನ್ನು ಹಾಗೂ ಅರ್ಜಿಯನ್ನು ಕಚೇರಿಯ ವೇಳೆಯಲ್ಲಿ ಅಕಾಡೆಮಿಯಿಂದ (ದೂ. ಸಂಖ್ಯೆ 080 - 22113146) ಪಡೆಯಬಹುದು

ಕವನ:ಜಿಪಿಆರ್.

# ಹೊಸ ಕೈಗಾರಿಕಾ ನೀತಿ 2014–19 ರ ಬಿಡುಗಡೆ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆವತಿಯಿಂದ ಅಕ್ಟೋಬರ್ 17 ರಂದು ಸಂಜೆ 4.30 ಗಂಟೆಗೆ ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿರುವ ಹೊಸ ಕೈಗಾರಿಕಾ ನೀತಿ 2014–19 ರ ಬಿಡುಗಡೆಯನ್ನು ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ನೆರವೇರಿಸಲಿದ್ದಾರೆ.

ಸಮಾರಂಭದ ಮುಖ್ಯ ಅತಿಥಿಯಾಗಿ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವ ಶ್ರೀ ಆರ್. ವಿ. ದೇಶಪಾಂಡೆ, ಯೋಜನೆ, ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ

ಸಚಿವ ಶ್ರೀ ಎಸ್. ಆರ್. ಪಾಟೀಲ್ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ, ಹಜ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಉಪಸ್ಥಿತರಿರುವರು.

ಕವನ:ಜಿಪಿಆರ್.

## ಕಚೇರಿ ಸ್ಥಳಾಂತರ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ನಗರದ ವಿಲ್ಸನ್ ಗಾರ್ಡನ್ 7 ನೇ ಅಡ್ಡರಸ್ತೆಯ ಪೋಲೀಸ್ ಠಾಣೆ ಸಮೀಪದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹಿರಿಯ ಉಪ ನೋಂದಣಾಧಿಕಾರಿಗಳ ಕಚೇರಿಯನ್ನು ಇತ್ತೀಚೆಗೆ ಶಾಂತಿನಗರ ಬಿ.ಎಂ.ಟಿ.ಸಿ. ಬಸ್ ನಿಲ್ದಾಣದ ಸಂಕೀರ್ಣಕ್ಕೆ ಸ್ಥಳಾಂತರಿಸಲಾಗಿದೆ.

ಸಾರ್ವಜನಿಕರು ಕಚೇರಿ ಬದಲಾದ ವಿಳಾಸವನ್ನು ಗಮನಿಸಿ ಈ ಕಚೇರಿಯ ಸೇವೆಯನ್ನು ಪಡೆದುಕೊಳ್ಳುವಂತೆ ಹಿರಿಯ ಉಪ ನೋಂದಣಾಧಿಕಾರಿ ಶ್ರೀ ಪಿ. ರಂಗಸ್ವಾಮಿ ಅವರು ಕೋರಿದ್ದಾರೆ.

ದೇ:ಜಿಪಿಆರ್.

## ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ಉನ್ನತ ಶಿಕ್ಷಣ ಇಲಾಖೆ, ನವದೆಹಲಿ ಇವರ " Central Sector Scheme Scholarship for Colleges and University Students" ಅಡಿಯಲ್ಲಿ ದ್ವಿತೀಯ ಪಿಯುಸಿ 2014 ರ ಪರೀಕ್ಷೆಯಲ್ಲಿ ವಿವಿಧ ಕ್ಯಾಟಗರಿ, ಸಂಯೋಜನೆ ಮತ್ತು ಲಿಂಗವಾರು ಒಟ್ಟು 600 ಅಂಕಗಳಿಗೆ ನಿಗಧಿಪಡಿಸಿರುವ cutoff ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಿರುತ್ತಾರೆ.

ಈ ಹಿಂದೆ ಅರ್ಜಿ ಸಲ್ಲಿಸಲು 10–10–2014 ಕೊನೆಯ ದಿನವಾಗಿತ್ತು. ಹೆಚ್ಚಿನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವ ಉದ್ದೇಶದಿಂದ ಅರ್ಹ ವಿದ್ಯಾರ್ಥಿಗಳು ಕಾಲೇಜಿನ ಪ್ರಾಂಶುಪಾಲರುಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ದಿನಾಂಕ: 25–10–2014 ರವರೆಗೆ ವಿಸ್ತರಿಸಲಾಗಿದೆ ಹಾಗೂ ಕಾಲೇನ ಪ್ರಾಂಶುಪಾಲರು ಇಲಾಖೆಗೆ ಕ್ರೋಢೀಕೃತ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ ದಿನಾಂಕ: 27–10–2014 ರವರೆಗೆ ವಿಸ್ತರಿಸಲಾಗಿದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಪದವಿ ಪೂರ್ವ ಶಿಕ್ಷಣ websidte no: http://puc.kar.nic.in ->> Scholarship->>MHRD Scholarship->> MHRD Scholarship -2014 Fresh batch ಇಲಾಖೆಯ ನಿಂದ ಅರ್ಜಿಯನ್ನು/ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕವನ:ಜಿಪಿಆರ್.

## ಪ್ರಧಾನ ಮಂತ್ರಿಗಳ ಶಿಷ್ಯವೇತನ, ವೃತ್ತಿಪರ ಕೋರ್ಸ್‌ಗಳಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

2014–15 ನೇ ಸಾಲಿನ ಪ್ರಧಾನ ಮಂತ್ರಿಗಳ ಶಿಷ್ಯವೇತನ, ವೃತ್ತಿಪರ ಕೋರ್ಸ್‌ಗಳಿಗಾಗಿ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಬೆಂಗಳೂರು ನಗರ ಜಿಲ್ಲೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಮಾಜಿ ಸೈನಿಕರ ಮಕ್ಕಳು (ಅಧಿಕಾರಿ ವರ್ಗದವರನ್ನು ಹೊರತುಪಡಿಸಿ) ಅರ್ಜಿಗಳನ್ನು Website www.desw.gov.in ಮೂಲಕ ಪಡೆದುಕೊಂಡು ದಿನಾಂಕ 20–11–2014 ರೊಳಗಾಗಿ ಸಲ್ಲಿಸಲು ಸೂಚಿಸಲಾಗಿದೆ. ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಭವನ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು –25 (ದೂರವಾಣಿ ಸಂಖ್ಯೆ 25585119) ಇವರನ್ನು ಸಂಪರ್ಕಿಸಬಹುದಾಗಿದೆ.

ಕವನ:ಕೆಎಂ

## ಸ್ಥಿರಾಸ್ತಿ ಮಾರುಕಟ್ಟೆ ಮೌಲ್ಯ ಪರಿಷ್ಕರಣೆ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಬೆಂಗಳೂರು ನಗರದ ಜಿಲ್ಲಾ ಉಪ ನೋಂದಣಿ ಕಚೇರಿಗಳ ವ್ಯಾಪ್ತಿಯಲ್ಲಿ ಬರುವ ಸ್ಥಿರಾಸ್ತಿಗಳ ನೋಂದಣಿಗಾಗಿ ಅಂದಾಜು ಮಾರುಕಟ್ಟೆ ಮೌಲ್ಯದ ಮಾರ್ಗಸೂಚಿ ದರಗಳ ತಾತ್ಕಾಲಿಕ ಪಟ್ಟಿಯನ್ನು ದಿನಾಂಕ 7–10–2014 ರ ಕರ್ನಾಟಕ ರಾಜ್ಯ ಸರ್ಕಾರದ ವಿಶೇಷ ರಾಜ್ಯ ಪತ್ರದಲ್ಲಿ (Extraordinary Gazettee) ಪ್ರಕಟಿಸಲಾಗಿದೆ. ತಾತ್ಕಾಲಿಕ ಮಾರ್ಗಸೂಚಿ ದರಗಳನ್ನು ವೆಬ್‌ಸೈಟ್ ವಿಳಾಸ: www.karunadu.gov.in/karigr ರಲ್ಲಿ ಅಳವಡಿಸಲಾಗಿದ್ದು, ಸಾರ್ವಜನಿಕರು ಈ ಬಗ್ಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿವಸಗಳೊಳಗಾಗಿ ಕಾರ್ಯದರ್ಶಿಗಳು ಕೇಂದ್ರ ಮೌಲ್ಯಮಾಪನ ಹಾಗೂ ನೋಂದಣಿ ಮಹಾಪರಿವೀಕ್ಷಕರು, ಕೇಂದ್ರ ಮೌಲ್ಯ ಮಾಪನ ಸಮಿತಿ ಇವರಿಗೆ ಮೇಲೆ ತಿಳಿಸಿದ ವಿಳಾಸಕ್ಕೆ ಅಂಚೆ ಮೂಲಕವಾಗಲಿ, ಖುದ್ದಾಗಿಯಾಗಲಿ ಅಥವಾ ಇ–ಮೇಲ್ ವಿಳಾಸಕ್ಕೆ ಕಳುಹಿಸಬಹುದಾಗಿದೆ.

ಕವನ:ಕೆಎಂ

# ನೆಹರೂ ತಾರಾಲಯದ ಪ್ರದರ್ಶನ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಜವಾಹರ್‌ಲಾಲ್ ನೆಹರೂ ತಾರಾಲಯದಲ್ಲಿ ಅಕ್ಟೋಬರ್ 15, 2014 ರಿಂದ ಈ ಕೆಳಕಂಡ ಪ್ರದರ್ಶನಗಳನ್ನು ಹಮ್ಮಿಕೊಳ್ಳಲಾಗಿದೆ. "ನಮ್ಮ ಸೌರವ್ಯೂಹ- ಪ್ರತಿ ದಿನ ಮಧ್ಯಾಹ್ನ 2-30 ಕ್ಕೆ ಕನ್ನಡ ಭಾಷೆಯಲ್ಲಿ, ಆಂಗ್ಲಭಾಷೆಯಲ್ಲಿ ಮಧ್ಯಾಹ್ನ 12-30 ಕ್ಕೆ, ಕೆಂಪು ಗ್ರಹ ಮಂಗಳ- ಪ್ರತಿ ದಿನ ಮಧ್ಯಾಹ್ನ 3-30 ಕ್ಕೆ, ಆಂಗ್ಲಭಾಷೆಯಲ್ಲಿ ಸಂಜೆ 4-30 ಕ್ಕೆ, ಗಗನಯಾನದ ನವೋದಯ ಭಾನುವಾರ ಮಾತ್ರ ಕನ್ನಡ ಭಾಷೆಯಲ್ಲಿ ಬೆಳಿಗ್ಗೆ 11-30 ಕ್ಕೆ ಹಾಗೂ ಆಂಗ್ಲಭಾಷೆಯಲ್ಲಿ ಮಧ್ಯಾಹ್ನ 1-30 ಕ್ಕೆ ಏರ್ಪಡಿಸಲಾಗಿದೆ. ತಾರಾಲಯದಕ್ಕೆ ಪ್ರತಿ ಸೋಮವಾರ ಹಾಗೂ ಎರಡನೇ ಮಂಗಳವಾರದಂದು ರಜೆ ಇರುತ್ತದೆ ಎಂದು ತಾರಾಲಯದ ಪ್ರಕಟಣೆ ತಿಳಿಸಿದೆ.

ಕವನ:ಕೆಎಂ

# ವನ್ಯಜೀವಿ ಸಪ್ತಾಹ ತರಬೇತಿ ಕಾರ್ಯಕ್ರಮ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ **''ವನ್ಯಜೀವಿ ಸಪ್ತಾಹ 2014''ರ** ಅಂಗವಾಗಿ ಒಂದು ದಿನದ ತರಬೇತಿದಾರರ ತರಬೇತಿಯನ್ನು ಶಾಲಾ ಶಿಕ್ಷಕರಿಗೆ, ಮುಖ್ಯೋಪಾದ್ಯಾಯರಿಗೆ, ವಿಭಾಗ ಶೈಕ್ಷಣಿಕ ಅಧಿಕಾರಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ವನ್ಯಜೀವಿ ಸಂರಕ್ಷಣೆ, ವನ್ಯಜೀವಿ ನಿರ್ವಹಣೆ, ಪರಿಸರ ಪ್ರವಾಸೋದ್ಯಮ, ಘನತ್ಯಾಜ್ಯ ನಿರ್ವಹಣೆ ಮತ್ತು ಮಳೆನೀರು ಕೊಯ್ಲುಗಳ ಬಗ್ಗೆ ಅರಿವು ನೀಡಲಾಯಿತು. ತರಬೇತಿ ಪಡೆದ ತರಬೇತಿದಾರರು ನೂರರಿಂದ ಸಾವಿರಾರು ವಿದ್ಯಾರ್ಥಿಗಳಿಗೆ ಮತ್ತು ಇಕೋ ಕ್ಲಬ್ ಅಥವಾ ಎನರ್ಜಿ ಕ್ಲಬ್ ವಿದ್ಯಾರ್ಥಿಗಳಿಗೆ ತಾವು ಪಡೆದ ಜ್ಞಾನದ ಬಗ್ಗೆ ಅರಿವು ಮೂಡಿಸುತ್ತಾರೆಂಬ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶ್ರೀ ವಿನಯ ಲೂತ್ರಾ, ಭಾ.ಅ.ಸೇ, ಪ್ರದಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ವನ್ಯ ಜೀವಿ) ರವರು ವನ್ಯಜೀವಿ ನಿರ್ವಹಣೆ ಬಗ್ಗೆ ತಿಳಿಸಿದರು. ವಿಶೇಷ ಅತಿಥಿಗಳಾದ ಶ್ರೀ ಮನೋಜ್ ಕುಮಾರ್, ಭಾ.ಅ.ಸೇ, ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಹೆಚ್ಚುವರಿ ನಿರ್ದೇಶಕರು, ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆ, ಬೆಂಗಳೂರು ರವರು ''ಪ್ರಕೃತಿ ಯಿಂದ ಸ್ಫೂರ್ತಿ'' ವಿಷಯವಾಗಿ ಮಾತನಾಡಿದರು. ಶ್ರೀ ಆರ್ ಕೆ ಸಿಂಗ್, ಭಾ.ಅ.ಸೇ., ಅಪರ ಪ್ರದಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ಜೀವವೈವಿಧ್ಯ ಮಂಡಳಿರವರು ಜವಾಬ್ದಾರಿಯುತ ಪರಿಸರ ಪ್ರವಾಸೋದ್ಯಮದ ಬಗ್ಗೆ ತಿಳಿಸಿದರು. ನಂತರ ಚಿಟ್ಟೆಗಳ ಸಂಕುಲದ ಉಳಿವಿನ ಬಗ್ಗೆ ಒಂದು ಸಾಕ್ಷಚಿತ್ರವನ್ನು ಪ್ರದರ್ಶಿಸಲಾಯಿತು ಹಾಗೂ ತರಬೇತಿದಾರರಿಗೆ ವನ್ಯಜೀವಿ ಅಕ್ರಮದ ಬಗ್ಗೆ

ಸುಳಿವು ಲಭ್ಯವಾದಲ್ಲಿ ಅರಣ್ಯಕೋಶಕ್ಕೆ ಮಾಹಿತಿ ನೀಡಲು ಅವರ ದೂರವಾಣಿ ಸಂಖ್ಯೆಯನ್ನು ಹಾಗೂ ಅಂತರ್ಜಾಲದ ವಿಳಾಸವನ್ನು ನೀಡಲಾಯಿತು. **“ತರಬೇತಿ ಕಾರ್ಯಾಗಾರದಲ್ಲಿ ಅನೇಕ ವಿಷಯಗಳಾದ ಘನತ್ಯಾಜ್ಯ ನಿರ್ವಹಣೆ, ಇಂಧನ ಸಂರಕ್ಷಣೆ ಹಾಗೂ ಮಳೆ ನೀರು ಕೊಯ್ಲು”** ಬಗ್ಗೆ ಅತಿಥಿ ಉಪನ್ಯಾಸಕಾರದ ಶ್ರೀ ರವಿಕುಮಾರ್, ಗ್ರೀನ್ ಟೆಕ್ ಪ್ರೈ.ಲಿರವರ ವಿಚಾರಗೋಷ್ಟಿಯಲ್ಲಿ ಸಭಿಕರ ಮನಮುಟ್ಟುವಂತೆ ವರ್ಣರಂಜಿತವಾಗಿ ವಿವರಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶ್ರೀ ವಿನಯ ಲೂತ್ರಾ, ಭಾ.ಅ.ಸೇ, ಪ್ರದಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ವನ್ಯ ಜೀವಿ)ಸಂಸ್ಥೆಯ **“ಹಸಿರು ಉಪಕ್ರಮದ”** ಬ್ಲಾಗ್‌ನ್ನು ಸಾರ್ವಜನಿಕರಿಗೆ ಉದ್ಘಾಟಿಸಿದರು. ಸಂಸ್ಥೆಯು ವಿವಿಧ ಸ್ಥರಗಳಲ್ಲಿ ಪರಿಸರ ಸಂರಕ್ಷಣೆಗೆ ತೆಗೆದುಕೊಳ್ಳುವ ಮಾಹಿತಿಯು ಈ ಬ್ಲಾಗ್‌ನಲ್ಲಿ ಒಳಗೊಂಡಿರುತ್ತದೆ, ಉಪಕ್ರಮಗಳೆಂದರೆ ನವೀಕರಿಸಬಹುದಾದ ಇಂಧನ ಮೂಲಗಳಿಂದ ಕುಗ್ರಾಮಗಳ ವಿದ್ಯುದೀಕರಣ, ಸಮಗ್ರ ಘನತ್ಯಾಜ್ಯ ನಿರ್ವಹಣೆ, ಅಭಯಾರಣ್ಯಗಳಲ್ಲಿರುವ ಗ್ರಾಮಗಳಲ್ಲಿ ಹೊಗೆ ರಹಿತ ಒಲೆಗಳ ಬಳಕೆ ತರಬೇತಿದಾರರಿಗೆ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ ಮೇಲೆ ತಿಳಿಸಿದ ಯಾವುದಾದರು ವಿಭಾಗದಲ್ಲಿ ಸಲಹೆ, ಸೂಚನೆಗಳು ಅಥವಾ ಹೊಸದಾಗಿ ತಂತ್ರಜ್ಞಾನಗಳ ಮಾಹಿತಿ ಇದ್ದಲ್ಲಿ ಈ ಕೆಳಕಂಡ ವಿಳಾಸ ಬ್ಲಾಗನಲ್ಲಿ ವಿನಿಮಯ ಮಾಡಲು ಕೋರಲಾಗಿದೆ. http://mgiredgreeninitiatives.blogspot.in and http://mgiredgreeninitiatives.wordpress.in

ಸಂಬಂಧಿಸಿದ ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ.

ಕವನ:ಕೆಎಂ

## Wildlife Week Training Programme

Bangalore, October 15 (Karnataka Information)

On the occasion of Wildlife week 2014, MGIRED organized a one day trainer’s training programme for School / College teachers, HM’s, BEO’s and students, on subjects such as wildlife conservation, wildlife management, ecotourism, solid waste management and rain water harvesting. It is hoped that the information received by trainers in this training programme will be further passed onto the 100s and 1000s students through the regular classes, eco clubs or energy clubs in the schools.

The chief guest Sri. Vinay Luthra, IFS, PCCF (Wild Life) spoke about wildlife management, Special guest Sri. Manoj Kumar, IFS, Conservator of Forests & Additional Director, Food & Civil Supplies Dept., Bangalore spoke about Nature Inspires, Sri R.K.Singh, IFS, APCCF and the member secretary to Karnataka Biodiversity Board spoke about Ecotourism. A short documentary on importance of protecting Butterflies was screened and information on the Wildlife Crimes Wing of Forest Department was shared with the participants to help in managing the illegal wildlife trade. There were also lectures on Solid waste management by Sri Ravikumar, Greentech Pvt. Ltd., Energy conservation and energy audit by Sri Ram Singh Verma, MGIRED and Rain water harvesting by Sri. A. R. Shivakumar, KSCST.

During the programme Chief Guest Sri Vinay Luthra, IFS, PCCF (WL) launched and declared the blog on the Green initiatives of MGIRED open to public. The blog contains information on various steps that MGIRED desires to take up to protect environment. The initiatives are remote village electrification using renewable energy sources, integrated solid waste management, construction and deployment of smokleless chulas in and around wildlife sanctuaries to reduce fire wood demand and help in combating climate change etc. Public can interact with MGIRED through this blog for further information on any of the initiatives in case they are desirous of being a part of the initiatives. The link is

http://mgiredgreeninitiatives.blogspot.in and http://mgiredgreeninitiatives.wordpress.in

ಕವನ:ಕೆಎಂ

## All India Sainik School Kodagu Entrance Exam

Bangalore, October 15 (Karnataka Information)

Sainik School Kodagu affiliated to CBSE is running under Government of Karnataka, Ministry of Defence. All India Sainik School Entrance Examination for admission to Class VI and class IX in Sainik School Kodagu for the academic session 2015-16 will be conducted on 4th January 2015 Sunday at Bangalore, Hassan, Mangalore, Shimoga, Sainik School Kodagu for class VI and only at Sainik School Kodagu for class IX. Last date for submission of duly filled application forms is 6th December 2014. For more information contact 08276-278963, Sainik School Kodagu (under Ministry of Defence) Post Koduge, Somavarpet Taluk, Kodagu District email-Kodagian@rediffmail.com.

ಕವನ:ಕೆಎಂ

## ವಿಧಾನ ಸೌಧದಲ್ಲಿ ಪ್ರತಿ ಗುರುವಾರ ಇಂಧನ ಸಚಿವರು

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಇಂಧನ ಇಲಾಖೆಯ ವಿಚಾರಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಂಡು ಇಲಾಖೆಯ ಸೇವೆಯನ್ನು ಇನ್ನೂ ಹೆಚ್ಚಿನ ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಚುನಾಯಿತ ಪ್ರತಿನಿಧಿಗಳನ್ನು ಭೇಟಿ ಮಾಡಿ ಅಹವಾಲುಗಳನ್ನು ಕೇಳಲು ಇಂಧನ ಸಚಿವರಾದ ಶ್ರೀ ಡಿ.ಕೆ.

ಶಿವಕುಮಾರ್‌ರವರು ವಿಧಾನ ಸೌಧದ ತಮ್ಮ ಕಚೇರಿಯಲ್ಲಿ ಸರ್ಕಾರಿ ರಜಾ ದಿನ ಹಾಗೂ ವಿಶೇಷ ಸಂದರ್ಭಗಳನ್ನು ಹೊರತುಪಡಿಸಿ, ಪ್ರತಿ ಗುರುವಾರ ಲಭ್ಯವಿರುತ್ತಾರೆ.

ರಾಜ್ಯದ ಚುನಾಯಿತ ಪ್ರತಿನಿಧಿಗಳು, ವಿಶೇಷವಾಗಿ ಶಾಸಕರು ಹಾಗೂ ಸಂಸತ್ ಸದಸ್ಯರು ಈ ಸಮಯದಲ್ಲಿ ಸಚಿವರನ್ನು ಭೇಟಿ ಮಾಡಿ ಇಲಾಖೆಯಲ್ಲಿ ಆಗಬೇಕಾದ ಸಾರ್ವಜನಿಕ ಕೆಲಸ ಕಾರ್ಯಗಳ ಬಗ್ಗೆ ಚರ್ಚಿಸಬಹುದಾಗಿದೆ ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಹೋ:ಕೆಎಂ

## ಸರ್.ಎಂ. ವಿಶ್ವೇಶ್ವರಯ್ಯ ಅವರು ನಿರ್ಮಾಣ ಮಾಡಿದ ಕಾಮಗಾರಿಗಳು ಇಂದಿಗೂ ಉತ್ಕೃಷ್ಟವಾದವು

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ಆಧುನಿಕ ತಂತ್ರಜ್ಞಾನದ ಅಳವಡಿಕೆಯಿಲ್ಲದೆ ಅಂದಿನ ದಿನಗಳಲ್ಲಿ ಸರ್.ಎಂ. ವಿಶ್ವೇಶ್ವರಯ್ಯ ಅವರು ನಿರ್ಮಿಸಿದ ಕಟ್ಟಡಗಳು, ಅಣೆಕಟ್ಟು, ಸೇತುವೆಗಳು ಇಂದಿಗೂ ತುಂಬಾ ಉತ್ಕೃಷ್ಟವಾಗಿದೆ ಎಂದು ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ಇಂದು ಮಧ್ಯಾಹ್ನ ಕುಮಾರ ಕೃಪ ಅತಿಥಿಗೃಹ ಆವರಣದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಮತ್ತು ಕರ್ನಾಟಕ ವಿಧಾನ ಮಂಡಲದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ನಿರ್ಮಿಸಲು ಉದ್ದೇಶಿಸಿರುವ ಪ್ರಮುಖ 10 ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ವಿಜ್ಞಾನ ತಂತ್ರಜ್ಞಾನವಿಲ್ಲದಿದ್ದರೂ ಆ ಕಾಲದ ಕಾಮಗಾರಿಗಳ ಗುಣಮಟ್ಟ ತುಂಬಾ ಉತ್ಕೃಷ್ಟವಾಗಿವೆ ಆದರೆ ಇಂದಿನ ದಿನಗಳಲ್ಲಿ ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಕಾಮಗಾರಿಗಳನ್ನು ನಿರ್ಮಿಸಿದರೂ ಗುಣಮಟ್ಟ ಕುಸಿದಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ವರುಣ ನಾಲೆ ನಿರ್ಮಾಣಕ್ಕೆ 18 1/2 ಕೋಟಿ ಅಂದಾಜು ವೆಚ್ಚವನ್ನು ನಿಗದಿಪಡಿಸಲಾಗಿತ್ತು. ಆದರೆ ಕಾಮಗಾರಿಯು ನಿಧಾನಗತಿಯಿಂದ ಸಾಗಿದ ಪರಿಣಾಮ 700 ರಿಂದ 800 ಕೋಟಿಯಷ್ಟು ವೆಚ್ಚವಾಗಿರುವುದಲ್ಲದೆ ಗುಣಮಟ್ಟ ಕೂಡ ಉತ್ತಮವಾಗಿಲ್ಲವೆಂದರು.

ಕಾಮಗಾರಿಗಳ ಗುಣಮಟ್ಟ ಉತ್ತಮವಾಗಿಲ್ಲದಿದ್ದರೆ ಸಾರ್ವಜನಿಕರ ನಿಂದನೆಗೆ ಗುರಿಯಾಗಬೇಕಾಗುತ್ತದೆ. ಆದ್ದರಿಂದ ಕಾಮಗಾರಿಗಳನ್ನು ಗುಣಮಟ್ಟದಿಂದ ನಿರ್ಮಿಸುವ ಜೊತೆಗೆ ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಅವರು ಇಲಾಖೆಯ ಇಂಜಿನಿಯರ್‌ಗಳಿಗೆ ಕಿವಿಮಾತು ಹೇಳಿದರು.

ಅಂತರರಾಷ್ಟ್ರೀಯ ಖ್ಯಾತಿ ಹೊಂದಿರುವ ಬೆಂಗಳೂರು ನಗರ ಅತಿವೇಗದಲ್ಲಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ಮೂಲಭೂತ ಸೌಲಭ್ಯ ಒದಗಿಸುವ ದೃಷ್ಟಿಯಿಂದ ಈ ಕಾಮಗಾರಿಯನ್ನು ಸರ್ಕಾರ ಕೈಗೆತ್ತಿಕೊಂಡಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಲೋಕೋಪಯೋಗಿ ಸಚಿವರಾದ ಡಾ: ಹೆಚ್.ಸಿ. ಮಹದೇವಪ್ಪ ಅವರು ಮಾತನಾಡಿ ಈ ಎಲ್ಲಾ ಕಾಮಗಾರಿಗಳಗೆ ಪಾರದರ್ಶಕವಾಗಿ ಟೆಂಡರ್ ಕರೆಯುವ ಮೂಲಕ ಗುಣಮಟ್ಟ ಕಾಮಗಾರಿಯನ್ನು ಕೈಗೊಳ್ಳುವ ಸಲುವಾಗಿ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗಿದೆಯಲ್ಲದೆ ಮಳೆಯಿಂದ ಹಾಳಾಗಿರುವ ಬೆಂಗಳೂರಿನ ರಸ್ತೆಗಳನ್ನು ದುರಸ್ತಿ ಮಾಡಲು 500 ಕೋಟಿ ರೂ. ಮಂಜೂರು ಮಾಡಲಾಗಿದ್ದು , ಆರ್‌ಐಎಸ್ ನಡಿ ಈಗಾಗಲೇ ಟೆಂಡರ್ ಕರೆಯಲಾಗಿದ್ದು ಮಳೆ ನಿಂತ ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದೆಂದರು.

ಬೆಂಗಳೂರಿನ ವಾಹನ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಸಲುವಾಗಿಯೂ ಮುಖ್ಯಮಂತ್ರಿ ಹಾಗೂ ತಮ್ಮ ಅಧ್ಯಕ್ಷತೆಯಲ್ಲಿ ಎರಡು ಸಮಿತಿಯನ್ನು ರಚಿಸಲಾಗಿದ್ದು ಈಗಾಗಲೇ ಅದಕ್ಕಾಗಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗಿದೆ ಎಂದರು

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ವಿಧಾನ ಪರಿಷತ್ತಿನ ಸಭಾಪತಿಗಳಾದ ಶ್ರೀ ಡಿ.ಹೆಚ್. ಶಂಕರಮೂರ್ತಿ ಹಾಗೂ ವಿಧಾನ ಸಭೆ ಸಭಾಧ್ಯಕ್ಷರಾದ ಶ್ರೀ ಕಾಗೋಡು ತಿಮ್ಮಪ್ಪ ಅವರಿಬ್ಬರೂ ಕಾಮಗಾರಿಗಳು ಗುಣಮಟ್ಟದಿಂದ ಕೂಡಿದೆ. ಇದು ಜೊತೆಗೆ ರಾಜ್ಯದ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕಾನೂನು ಸಚಿವರಾದ ಶ್ರೀ ಟಿ. ಬಿ. ಜಯಚಂದ್ರ, ಸಾರಿಗೆ ಸಚಿವ ಶ್ರೀ ರಾಮಲಿಂಗಾರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಮೂಲಭೂತ ಸೌಲಭ್ಯ ಅಭಿವೃದ್ಧಿ ಮತ್ತು ಹಜ್ ಸಚಿವರಾದ ಶ್ರೀ ಆರ್. ರೋಷನ್ ಬೇಗ್, ಶಾಸಕರಾದ ಶ್ರೀ ಮುನಿರತ್ನ, ಶ್ರೀ ಸುಧಾಕರ್ ಹಾಗು ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕಾಮಗಾರಿಗಳ ವಿವರ:

ಇಂದು ಲೋಕೋಪಯೋಗಿ ಇಲಾಖೆಯ ವತಿಯಿಂದ ಶಂಕುಸ್ಥಾಪನೆಗೊಂಡ ಕಾಮಗಾರಿಗಳಲ್ಲಿ ಶಾಸಕರ ಭವನದ ಆವರಣದಲ್ಲಿರುವ ಬಹುಮಹಡಿ ಪಾರ್ಕಿಂಗ್ ಕಟ್ಟಡದ ಮೇಲೆ ಶಾಸಕರುಗಳಗೆ 50 ಸಾಂಸಾರಿಕ ಕೊಠಡಿಗಳ ನಿರ್ಮಾಣ ಸೇರಿದಂತೆ ಕುಮಾರಕೃಪ ಅತಿಥಿಗೃಹ ಆವರಣದಲ್ಲಿ ಗ್ರಂಥಾಲಯ ಅತ್ಯಾಧುನಿಕ ಅಡುಗೆ ಕೋಣೆ ಡೈನಿಂಗ್ ಹಾಲ್, ಮೀಟಿಂಗ್ ಹಾಲ್ ಹಾಗೂ ಜಿಮ್ ವ್ಯವಸ್ಥೆ ಸೇರಿದಂತೆ ಉನ್ನತಾಧಿಕಾರಿಗಳ ವಾಸ್ತವ್ಯಕ್ಕಾಗಿ 202 ಹೆಚ್ಚುವರಿ ಅತಿಥಿಗೃಹ ನಿರ್ಮಾಣ ಸರ್ಕಾರಿ ಅಧಿಕಾರಿಗಳಗೆ 16 ಹಾಗೂ ಸಿಬ್ಬಂದಿಗೆ 60 ವಸತಿಗೃಹ ನಿರ್ಮಾಣ, ಲೋಕೋಪಯೋಗಿ ಇಲಾಖೆಯಲ್ಲಿ ವಾಹನ ನಿಲುಗಡೆಗೆ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಕೃಷಿ ಮತ್ತು ತೋಟಗಾರಿಕೆ ಇಲಾಖೆ ಹಾಗೂ ಕಾವೇರಿ ಅತಿಥಿಗೃಹದ ನವೀಕರಣ ಕಾಮಗಾರಿ ಸೇರಿದಂತೆ ಸುಮಾರು 10 ಕಾಮಗಾರಿಗಳಗೆ 200 ಕೋಟಿ ರೂ. ವೆಚ್ಚದಲ್ಲಿ ಹಾಗೂ 17 ಕಾಮಗಾರಿಗಳಗೆ 96.90 ಕೋಟಿ ವೆಚ್ಚದಲ್ಲಿ ಚಾಲನೆ ನೀಡಲಾಯಿತು.

ಕವನ:ಬಿಜಿಪಿ:ಕೆಎಂ

## ಮಹಿಳಾ ದೌರ್ಜನ್ಯ ಗ್ರಾಮ ಮಟ್ಟದಲ್ಲಿ ತಡೆಗಟ್ಟಲು ಕರೆ : ಅಧ್ಯಕ್ಷರು ಮಹಿಳಾ ಆಯೋಗ

ಬೆಂಗಳೂರು ಗ್ರಾ.ಜಿ. ಅ. 14 (ಕರ್ನಾಟಕ ವಾರ್ತೆ): ಮಹಿಳೆಯರ ಮೇಲೆ ಆಗುತ್ತಿರುವ ವಿವಿಧ ರೀತಿಯ ಹಿಂಸೆ, ಕಿರುಕುಳ, ದೌರ್ಜನ್ಯಗಳನ್ನು ತಡೆಗಟ್ಟಲು ಗ್ರಾಮ ಸಭೆಗಳನ್ನು ನಡೆಸುವ ಮೂಲಕ ಪರಿಹಾರ ಕಂಡುಕೊಳ್ಳಬೇಕೆಂದು ಸಾಂತ್ವನ ಕೇಂದ್ರಗಳ ಸಿಬ್ಬಂದಿಗಳಿಗೆ ಮಹಿಳಾ ಆಯೋಗದ ಅಧ್ಯಕ್ಷರಾದ ಶ್ರೀಮತಿ ಮಂಜುಳಾ ಮಾನಸ ಅಧಿಕಾರಿಗಳಿಗೆ ಸೂಚಿಸಿದರು.

ದೌರ್ಜಜನ್ಯಕ್ಕೆ ಒಳಗಾದ ಅಮಾಯಕ ಹೆಣ್ಣು ಮಕ್ಕಳು ನ್ಯಾಯಕ್ಕಾಗಿ ಯಾರಲ್ಲಿ ಹೋಗಬೇಕೆಂದು ತಿಳಿಯದೆ ಗೊಂದಲದಲ್ಲಿ ಇರುತ್ತಾರೆ. ಅವರಿಗೆ ಸಾಂತ್ವನ ಕೇಂದ್ರಗಳು ಕಾನೂನಿನ ಬಗ್ಗೆ ಹಾಗೂ ಹೆಣ್ಣು ಮಕ್ಕಳ ಹಕ್ಕುಗಳ ಕುರಿತು ಅರಿವು ಮೂಡಿಸಬೇಕು. ದೂರು ನೀಡಿದ ಕೂಡಲೇ ದಾವ ದಾಖಲಿಸದೆ ಕೌನ್ಸಿಲಿಂಗ್ ಮೂಲಕ ಪರಿಹರಿಸಲು ಪ್ರಯತಿಸಬೇಕು ಎಂದು ಅವರು ಅಧಿಕಾರಿಗಳಿಗೆ ಕರೆ ನೀಡಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ದೌರ್ಜನ್ಯ ಕುರಿತ ಸಭೆಯಲ್ಲಿ ಮಾಡನಾಡುತ್ತಾ, ಭಾರತದಲ್ಲಿ ದೂರು ನೀಡದಿರುವ ಪ್ರಕರಣಗಳ ಹೊರತುಪಡಿಸಿ ಐದು ಕೋಟಿ ಹೆಣ್ಣು ಮಕ್ಕಳು ದೌರ್ಜನ್ಯಕ್ಕೆ ಒಳಗಾಗಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಈ ಸಂಬಂಧ 53 ದೂರುಗಳು ದಾಖಲಾಗಿವೆ ಎಂದರು. ಮಹಿಳೆಯರ ಮೇಲಿನ ದೌರ್ಜನ್ಯ ಹೆಚ್ಚಾಗುತ್ತಿರುವುದು ಆತಂಕ ಮೂಡಿಸುತ್ತಿದೆ. ಇಂತಹ ಪ್ರಕರಣಗಳ ಹೊತ್ತು ಆರಕ್ಷಕ ಠಾಣೆಗೆ ಬರುವ ಹೆಣ್ಣು ಮಕ್ಕಳನ್ನು ಠಾಣೆಯ ಸಿಬ್ಬಂದಿಗಳು ಗೌರವದಿಂದ ನೋಡಿಕೊಳ್ಳಬೇಕು. ಇಲ್ಲದಿದ್ದ ಪಕ್ಷದಲ್ಲಿ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ಮಹಿಳೆಯರಿಗೆ ಸಹಕಾರಿಯಾಗುವಂತೆ ಸಾಂತ್ವನ ಕೇಂದ್ರಗಳು ಸರಿಯಾದ ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ನೀಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿಗಳಾದ ಶ್ರೀಮತಿ ಸಲ್ಮಾ ಕೆ.ಫಹೀಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಶ್ರೀಮತಿ ಶೈಲಜಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಮಹೇಶ್ವರಪ್ಪ, ಜಿಲ್ಲಾ ಪೋಲೀಸ್ ಅಧಿಕಾರಿ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಿದೆ.

ಆರ್ಎಸ್

## ಪತ್ರಿಕೋದ್ಯಮ ಪದವೀಧರರಿಗೆ ವೃತ್ತಿ ಕೌಶಲ್ಯ ಹಾಗೂ ನಿರೂಪಣಾ ಕೌಶಲ್ಯ ತರಬೇತಿ

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2014-15ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗಾಗಿ, ವೃತ್ತಿ ಕೌಶಲ್ಯ ಹಾಗೂ ನಿರೂಪಣಾ ಕೌಶಲ್ಯ ತರಬೇತಿ ನೀಡುವ ಮೂಲಕ ಪ್ರೋತ್ಸಾಹಿಸುವ ಕಾರ್ಯಕ್ರಮಕ್ಕಾಗಿ ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಅರ್ಜಿಗಳನ್ನು ಸಲ್ಲಿಸಲು ದಿನಾಂಕ 25-10-2014ರವರೆಗೆ ಅವಧಿ ವಿಸ್ತರಿಸಲಾಗಿದೆ.

ಪರಿಶಿಷ್ಟ ಜಾತಿಗೆ ಸೇರಿದ, ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಕನಿಷ್ಠ ಶೇ. 50ರಷ್ಟು ಅಂಕಗಳನ್ನು ಗಳಿಸಿ ಪದವಿ/ ಸ್ನಾತಕೋತ್ತರ ಪದವಿ ಪಡೆದಿರುವ, 18 ರಿಂದ 35 ವರ್ಷಗಳೊಳಗಿರುವ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ2.5ಲಕ್ಷ ಗಳನ್ನು ಮೀರದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಕನಿಷ್ಠ ಶೇ. 50ರಷ್ಟು ಅಂಕಗಳನ್ನು ಗಳಿಸಿ ಪದವಿ/ ಸ್ನಾತಕೋತ್ತರ ಪದವಿ ಪಡೆದಿರುವ, ಅಥವಾ ಪತ್ರಿಕೋದ್ಯಮ ವಿಷಯದಲ್ಲಿ ವ್ಯಾಸಂಗ ಮಾಡುತ್ತಿರುವ ಪದವಿಯ ಅಂತಿಮ ವರ್ಷದ ಹಾಗೂ ಸ್ನಾತಕೋತ್ತರ ಪದವಿಯ ಎರಡೂ ವರ್ಷದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಯು 18 ರಿಂದ 35 ವರ್ಷಗಳೊಳಗಿದ್ದು, ಕುಟುಂಬದ ವಾರ್ಷಿಕ ಆದಾಯ ರೂ2.5ಲಕ್ಷ ಗಳನ್ನು ಮೀರಿರಬಾರದು.

ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಕನಿಷ್ಠ ಶೇ. 50ರಷ್ಟು ಅಂಕಗಳನ್ನು ಗಳಿಸಿ ಪದವಿ/ ಸ್ನಾತಕೋತ್ತರ ಪದವಿ ಪಡೆದಿರುವ, 18 ರಿಂದ 35 ವರ್ಷಗಳೊಳಗಿರುವ, ಕುಟುಂಬದ ವಾರ್ಷಿಕ ಆದಾಯ ರೂ2.00 ಲಕ್ಷಗಳನ್ನು ಮೀರದಿರುವ ಹಾಗೂ ಕೆನೆಪದರ ವ್ಯಾಪ್ತಿಗೆ ಒಳಪಡದಂತಹ ಅಭ್ಯರ್ಥಿಗಳು ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಅಭ್ಯರ್ಥಿಗಳು ಪ್ರಸ್ತುತ ಸಾಲಿನಲ್ಲಿ ಇದೇ ಸ್ವರೂಪದ ತರಬೇತಿಯನ್ನು ಸರ್ಕಾರದ ಯಾವುದೇ ಇಲಾಖೆಯಿಂದ ಪಡೆದಿರಬಾರದು.

ಅರ್ಜಿಯ ನಿಗದಿತ ನಮೂನೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕೃತ ವೆಬ್‌ಸೈಟ್ **www.karnatakavarthe.org** ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ದಿನಾಂಕ 25-10-2014 ರೊಳಗಾಗಿ ಸಲ್ಲಿಸಬೇಕು. ಅಪೂರ್ಣ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿ ಗೈರುಹಾಜರಾದಲ್ಲಿ ಮೆರಿಟ್ ಆಧಾರದ ಮೇಲೆ ಮುಂದಿನ ಅಭ್ಯರ್ಥಿಗೆ ಅವಕಾಶ ನೀಡಲಾಗುವುದು.

ಭರ್ತಿ ಮಾಡಿದ ಅರ್ಜಿಗಳನ್ನು ಕಳುಹಿಸಬೇಕಾದ ವಿಳಾಸ 'ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು- 560001' ಹಾಗೂ ದಾಖಲೆಗಳ ಸಾಫ್ಟ್ ಕಾಪಿಯನ್ನು **scpinformationdepartment@gmail.com** ಗೆ ಇ-ಮೇಲ್ ಮಾಡಬಹುದು.

ಪಹೊ/ಕವನ/